ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶನಿವಾರ, ದಿನಾಂಕ 20ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 09.30 ಗಂಟೆಗೆ)

-----

1. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

(i) ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014

ಶ್ರೀ ಬಿ.ರಮಾನಾಥ ರೈ (ಅರಣ್ಯ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2014

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಹಿಂದಕ್ಕೆ ಪಡೆಯುವುದು.

1. ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2010.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

2010ನೇ ಸಾಲಿನ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

ಮು.ತಿ.ನೋ.,

2. **ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕ, 2012.**

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು) ಅವರು:–
2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ.ದತ್ತ, ಹೆಚ್.ಡಿ.ರೇವಣ್ಣ, ಎನ್.ಚಲುವರಾಯಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹಾಗೂ ಇತರರು ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದಾಗಿ ಬೆಳೆ ಹಾನಿ, ಜನ ಜಾನುವಾರುಗಳ ಜೀವ ಹಾನಿ, ಸಾರ್ವಜನಿಕರ ಆಸ್ತಿ, ರಸ್ತೆ ಮತ್ತು ಸೇತುವೆಗಳು ಹಾನಿಯಾಗಿರುವ ಬಗ್ಗೆ ಚರ್ಚೆ.

2. ಶ್ರೀ ವಿ. ಸುನೀಲ್‌ಕುಮಾರ್ ಅವರು ಆಹಾರ ಹಾಗೂ ನಾಗರೀಕ ಪೂರೈಕೆ ಇಲಾಖೆಯಿಂದ ರಾಜ್ಯದ ಜನತೆಗೆ ಪಡಿತರಚೀಟಿ ವಿತರಿಸಲಾಗಿದೆ ಆದರೆ ಇಲಾಖೆಯು ಪಡಿತರಚೀಟಿಯಲ್ಲಿ ನಿರ್ವಹಣೆಯನ್ನು ಸುಧಾರಿಸುವ ನೆಪದಲ್ಲಿ ಪಡಿತರಚೀಟಿದಾರರ ಗಮನಕ್ಕೆ ತರದೆ ಹಲವಾರು ಪಡಿತರ ಚೀಟಿಗಳನ್ನು ರದ್ದು ಪಡಿಸುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಎಂ.ಪಿ. ಅಪ್ಪಚ್ಚುರಂಜನ್, ಕೆ.ಜಿ.ಬೋಪಯ್ಯ, ಎಸ್.ಅಂಗಾರ, ಎನ್.ಎ.ಹ್ಯಾರಿಸ್, ಬಿ.ಬಿ.ನಿಂಗಯ್ಯ, ಮಧು ಎಸ್. ಬಂಗಾರಪ್ಪ ಮತ್ತು ಇತರರು ಕಾಫಿ ಮತ್ತು ಇತರೆ ಬೆಳೆಯುವ ಸಣ್ಣ ಮತ್ತು ಅತಿ ಸಣ್ಣ ರೈತರು ಕಂದಾಯ, ಅರಣ್ಯ ಜಮೀನು, ಸಿ.ಎನ್.ಬಿ. ಮತ್ತು ಇತರೆ ಸರ್ಕಾರಿ ಭೂಮಿಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿದ್ದಾರೆ 5 ಎಕರೆಗಿಂತ ಕಡಿಮೆ ಒತ್ತುವರಿದಾರರನ್ನು ತೆರವುಗೊಳಿಸುವುದಿಲ್ಲ ಎಂದು ಘೋಷಣೆ ಮಾಡಿದ್ದರೂ ಕಾರ್ಯರೂಪಕ್ಕೆ ಬಾರದಿರುವ ಬಗ್ಗೆ ಹಾಗೂ ಸಾಗುವಳಿದಾರರನ್ನು ಒಕ್ಕಲೆಬ್ಬಿಸುತ್ತಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಬಿ.ಆರ್.ಯಾವಗಲ್, ಜೆ.ಟಿ. ಪಾಟೀಲ್, ಸಿದ್ದುನ್ಯಾಮಗೌಡ, ಜಿ.ಎಸ್. ಪಾಟೀಲ್, ಹೆಚ್.ವೈ.ಮೇಟಿ ಮತ್ತು ಯಶವಂತರಾಯಗೌಡ ಪಾಟೀಲ್ ಅವರುಗಳು ಮಹಾದಾಯಿ ನದಿ ಕೊಳ್ಳದಿಂದ ಕರ್ನಾಟಕದ ಪಾಲನ್ನು ಪಡೆದು ಉತ್ತರ ಕರ್ನಾಟಕದ ಅನೇಕ ಯೋಜನೆಗಳನ್ನು ಯಶಸ್ವಿಗೊಳಿಸಬೇಕಾಗಿರುವ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಎಲ್.ಎ. ರವಿಸುಬ್ರಮಣ್ಯ, ಎಸ್.ಸುರೇಶಕುಮಾರ್, ಎಂ. ಸತೀಶ್ ರೆಡ್ಡಿ, ಬಿ.ಎನ್. ವಿಜಯಕುಮಾರ್, ಆರ್. ಜಗದೀಶಕುಮಾರ್ ಅವರುಗಳು ಬೆಂಗಳೂರು ಮಹಾನಗರ ಪಾಲಿಕೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಿದ ನಂತರವೂ ನಗರದ ಸಮಸ್ಯೆಗಳು ಬಗೆಹರಿದಿಲ್ಲ ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಯ ಶಾಸಕರಿಗೆ ಇರುವ ಅಧಿಕಾರ ವ್ಯಾಪ್ತಿಯ ಸ್ಪಷ್ಟತೆ ಇಲ್ಲದಿರುವುದರ ಬಗ್ಗೆ ಚರ್ಚೆ.

ಪು.ತಿ.ನೋ.,

6. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಗೋವಿಂದ ಎಂ. ಕಾರಜೋಳ, ಬಸವರಾಜ ಎಸ್. ಬೊಮ್ಮಾಯಿ, ಬಿ. ಸುರೇಶ್‌ಗೌಡ, ರಮೇಶ ಭೂಸನೂರ ಹಾಗೂ ಇತರರು ಕೃಷ್ಣಾ ಮತ್ತು ಕಾವೇರಿ ನ್ಯಾಯಾಧಿಕರಣ ತೀರ್ಪಿನ ನಂತರ ರಾಜ್ಯ ಸರ್ಕಾರ ಎರಡೂ ನದಿಗಳಲ್ಲಿ ಪಾಲನ್ನು ಬಳಕೆ ಮಾಡಲು ವಿಳಂಬ ಮಾಡಿರುವ ಬಗ್ಗೆ ಚರ್ಚೆ.

7. ಶ್ರೀಯುತರುಗಳಾದ ಡಾ॥ ಕೆ.ಸುಧಾಕರ್, ಎಂ.ರಾಜಣ್ಣ ಮತ್ತು ಎಸ್.ಎನ್. ಸುಬ್ಬಾರೆಡ್ಡಿ ಅವರುಗಳು ಚಿಕ್ಕಬಳ್ಳಾಪುರ ಜಿಲ್ಲೆ ನಂದಿ ಹೋಬಳಿಯ ನೆಲಮಾಕಲಹಳ್ಳಿ ಗ್ರಾಮದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದ್ದ ಜವಳಿ ಪಾರ್ಕ್ ಯೋಜನೆಯನ್ನು ಸರ್ಕಾರ ಹಿಂಪಡೆದಿರುವ ಬಗ್ಗೆ ಚರ್ಚೆ.

೩. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ರಾಗಿ ಮತ್ತು ಮೆಕ್ಕೆ ಜೋಳದ ಬೆಲೆ ಕುಸಿದಿದ್ದು ಸರಿಯಾದ ಬೆಂಬಲ ಬೆಲೆಯನ್ನು ಘೋಷಿಸದೆ ರೈತರಿಗೆ ತೊಂದರೆಯಾಗಿರುವ ಬಗ್ಗೆ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಹೆಚ್.ಡಿ.ರೇವಣ್ಣ, ಬಿ.ಬಿ.ನಿಂಗಯ್ಯ ಹಾಗೂ ಇತರರು ಹಾಸನ ನಗರ ಸಭೆ ಆಯುಕ್ತರು ಈ ಹಿಂದೆ ದಾಂಡೇಲಿ, ಮಂಡ್ಯ, ಚಿಕ್ಕಮಗಳೂರು ಮತ್ತು ಚಾಮರಾಜನಗರ ನಗರಸಭೆಗಳಲ್ಲಿ ಪೌರಾಯುಕ್ತರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಹಲವಾರು ಅಕ್ರಮ ಮತ್ತು ಕಾನೂನು ಬಾಹಿರ ಭ್ರಷ್ಟಾಚಾರ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ರಾಜ್ಯದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಗಳು, ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಮುಜರಾಯಿ ಇಲಾಖೆಗೆ ಸೇರಿದ ಹಣವನ್ನು ಸಹಕಾರಿ ಸಂಸ್ಥೆಗಳಲ್ಲಿ ಠೇವಣಿ ಇಡಲು ಅವಕಾಶ ಇಲ್ಲದಂತೆ ಜಾರಿಯಲ್ಲಿರುವ ಸರ್ಕಾರಿ ಸುತ್ತೋಲೆಯನ್ನು ಹಿಂತೆಗೆದುಕೊಳ್ಳುವ ಬಗ್ಗೆ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

4. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಹೇಮಾವತಿ ಯೋಜನೆಯ ಬಲದಂಡೆ ನಾಲೆಯ ೩೫ನೇ ವಿತರಣಾ ನಾಲೆಯನ್ನು ನೀರಾವರಿ ಸೌಲಭ್ಯವನ್ನು ಕಲ್ಪಿಸಲು ನಿರ್ಮಾಣ ಮಾಡಿ ಹಲವಾರು ವರ್ಷ ಕಳೆದಿದ್ದರೂ ಸಹ ಈವರೆಗೂ ಸದರಿ ನಾಲೆಯಲ್ಲಿ ನೀರನ್ನು ಹರಿಸದಿರುವುದರಿಂದ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

5. ಶ್ರೀ ಸಿ.ಟಿ. ರವಿ ಅವರು ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟ ಧಾರ್ಮಿಕ ಸಂಸ್ಥೆಗಳ ವತಿಯಿಂದ ಒಟ್ಟು 21 ಶಿಕ್ಷಣ ಸಂಸ್ಥೆಗಳು ನಡೆಯುತ್ತಿದ್ದು ಅವುಗಳನ್ನು ಶಿಕ್ಷಣ ಇಲಾಖೆಗೆ ವಹಿಸುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6. ಶ್ರೀ ಹೆಚ್.ಎಸ್. ಶಿವಶಂಕರ ಅವರು ದಾವಣಗೆರೆ ಸಣ್ಣ ನೀರಾವರಿ ಇಲಾಖೆಗೆ ಸಂಬಂಧಿಸಿದ ಉಪ ವಿಭಾಗದ ಕಾರ್ಯಭಾರ ಒತ್ತಡ ಕಡಿಮೆ ಮಾಡಲು ಹೊನ್ನಾಳಿ ಉಪ ವಿಭಾಗಕ್ಕೆ ಹರಪನಹಳ್ಳಿ ಮತ್ತು ಹರಿಹರ ತಾಲ್ಲೂಕುಗಳ ಕಾಮಗಾರಿಗಳ ನಿರ್ವಹಣೆಯನ್ನು ವರ್ಗಾಯಿಸುವ ಬಗ್ಗೆ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಮನೋಹರ ಹೆಚ್. ತಹಶೀಲ್ದಾರ್ ಅವರು ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನಲ್ಲಿ ಸಾರ್ವಜನಿಕರ ಆರೋಗ್ಯ ಕಾಪಾಡುವ ಆಸ್ಪತ್ರೆಗಳಲ್ಲಿ ಶೇಕಡಾ 50ರಷ್ಟು ವೈದ್ಯಾಧಿಕಾರಿ ಸಿಬ್ಬಂದಿವರ್ಗದವರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8. ಶ್ರೀ ಎಸ್.ಎನ್.ನಾರಾಯಣಸ್ವಾಮಿ.ಕೆ.ಎಂ. ಅವರು ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ನಿಯಮ 32ರಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಬಡ್ತಿ ಪಡೆದಿದ್ದ ದಿನಾಂಕದಿಂದ ಜೇಷ್ಠತೆಗೆ ಪರಿಗಣಿಸಲು ಶಿಕ್ಷಣ ಇಲಾಖೆಯು ಅನುಮತಿ ನೀಡಿ ಆದೇಶ ಹೊರಡಿಸದಿರುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯುವುದು.

9. ಶ್ರೀ ಡಾ॥ ವಿಶ್ವನಾಥ ಈ. ಪಾಟೀಲ ಅವರು ಗ್ರಾಮೀಣ ನೀರು ಮತ್ತು ನೈರ್ಮಲ್ಯ ಯೋಜನೆಯ ಅಡಿಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು/ಹೋಬಳಿ ಮಟ್ಟದ ಸಂಯೋಜಕರು/ಸಮನ್ವಯ ಸಿಬ್ಬಂದಿಗಳನ್ನು ಜಿಲ್ಲಾ ಪಂಚಾಯತ್ ಅಧೀನದಲ್ಲಿ ಅಥವಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

10. ಶ್ರೀ ಬಿ. ಸುರೇಶಗೌಡ ಅವರು ತುಮಕೂರು ತಾಲ್ಲೂಕಿನ ಹೆಬ್ಬೂರಿಗೆ ಹೊಸ ಡಾ॥ ಅಂಬೇಡ್ಕರ್ ಭವನ ನಿರ್ಮಾಣದ ಮುಂದುವರೆದ ಕಾಮಗಾರಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11. ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ ಮತ್ತು ಬಿ.ಬಿ. ನಿಂಗಯ್ಯ ಅವರುಗಳು ಮೈಸೂರು ತಾಲ್ಲೂಕು, ಕುಪ್ಪೇಗಾಲ ಗ್ರಾಮದಲ್ಲಿ ದಲಿತ ಅಡುಗೆ ಸಹಾಯಕಿ ತಯಾರಿಸಿದ ಬಿಸಿಯೂಟ ಸೇವಿಸದಂತೆ ಆ ಗ್ರಾಮದ ಸವರ್ಣೀಯರು ಅಡ್ಡಿಪಡಿಸಿದ್ದು, ಇನ್ನೂ ಅಸ್ಪೃಶ್ಯತೆ ಆಚರಣೆಯು ಮುಂದುವರೆಯುತ್ತಿರುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

12. ಶ್ರೀ ವಿಜಯಾನಂದ ಎಸ್. ಕಾಶಪ್ಪನವರ ಅವರು ಬಾಗಲಕೋಟೆ ಜಿಲ್ಲೆ ಹುನಗುಂದ ತಾಲ್ಲೂಕಿನ ಇಲಕಲ್ಲನ್ನು ಹೊಸ ತಾಲ್ಲೂಕನ್ನಾಗಿ ಘೋಷಿಸುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

13. ಶ್ರೀ ವಡ್ನಾಳ ರಾಜಣ್ಣ ಅವರು 2013-14ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ ಬಂದಿದ್ದು ಪರಿಹಾರ ಧನ ಘೋಷಿಸಿದ್ದರೂ ಈವರೆಗೂ ಪರಿಹಾರ ಧನ ಬಿಡುಗಡೆಯಾಗದಿರುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

14. ಶ್ರೀ ಎಸ್.ಭೀಮಾನಾಯಕ್ ಅವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಮರಿಯಮ್ಮನಹಳ್ಳಿ ಪೋಲೀಸ್ ಠಾಣೆಯ ಸಬ್‌ಇನ್ಸಪೆಕ್ಟರ್‌ರವರು ಬೈಕ್ ಮೇಲೆ ರಾಷ್ಟ್ರಧ್ವಜ ಕಟ್ಟಿ ಜಾಥಾ ನಡೆಸುತ್ತಿದ್ದ ಯುವಕರ ಮೇಲೆ ಹಲ್ಲೆ ನಡೆಸಿ, ಸಾರ್ವಜನಿಕರೊಂದಿಗೆ ಅನುಚಿತವಾಗಿ ವರ್ತಿಸಿದ ಹಿನ್ನಲೆಯಲ್ಲಿ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಗೃಹ ಸಚಿವರ ಗಮನ ಸೆಳೆಯವುದು.

15. ಶ್ರೀ ಸಿದ್ದುನ್ಯಾಮಗೌಡ ಅವರು ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನಲ್ಲಿ ವಿದ್ಯುತ್ ಸರಬರಾಜು ಮಾಡುವ ಟಿ.ಸಿ ಮತ್ತು ಸ್ಟಾರ್ಟರ್‌ಗಳು ತುಂಬಾ ಹಳೆಯದಾಗಿದ್ದು, ಅವುಗಳನ್ನು ಬದಲಾಯಿಸಿ ಹೊಸ ಉಪಕರಣಗಳನ್ನು ಅಳವಡಿಸುವ ಬಗ್ಗೆ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

16. ಶ್ರೀ ಯು.ಬಿ. ಬಣಕಾರ ಅವರು ತುಂಗಾ ಮೇಲ್ದಂಡೆ ಯೋಜನೆಯು ಹಿರೇಕೆರೂರ ತಾಲ್ಲೂಕಿನಲ್ಲಿ ನಿಧಾನ ಗತಿಯಿಂದ ಕಾರ್ಯನಿರ್ವಹಿಸುತ್ತಿರುವುದರಿಂದ ರೈತರಿಗೆ ತೊಂದರೆಯುಂಟಾಗಿರುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

17. ಶ್ರೀ ವೈ.ಎಸ್.ವಿ. ದತ್ತ ಅವರು ಕಡೂರು ತಾಲ್ಲೂಕಿನ ಮದಗದ ಕೆರೆಗೆ ನೀರು ಹರಿಸುವ ಹೆಬ್ಬೆ ಜಲ ತಿರುವು ಯೋಜನೆ ಅನುಷ್ಠಾನದ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

18. ಶ್ರೀ ಡಿ.ಜಿ. ಶಾಂತನಗೌಡ ಅವರು ದೇವರ ಹೊನ್ನಾಳಿ ಏತ ನೀರಾವರಿ ಯೋಜನೆ ಪ್ರಾರಂಭವಾಗಿ 10 ವರ್ಷ ಕಳೆದರೂ ಸಹ ಕಾಮಗಾರಿ ಪೂರ್ಣಗೊಳ್ಳದಿರುವ ಬಗ್ಗೆ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

19. ಶ್ರೀ ಎಂ.ರಾಜಣ್ಣ ಅವರು ಶಿಡ್ಲಘಟ್ಟ ತಾಲ್ಲೂಕಿನಲ್ಲಿ ರೇಷ್ಮೆ ಬೆಳೆಯುವ ರೈತರಿಗೆ ರೇಷ್ಮೆ ಬೆಳೆಯಲು ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

20. ಶ್ರೀಮತಿ ಶಾರದ ಮೋಹನ ಶೆಟ್ಟಿ ಅವರು ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಪ್ರತಿ ವರ್ಷ ತಾಂತ್ರಿಕ ಬೋಟ್‌ಗಳ ನಿರ್ಮಾಣದ ಗುರಿಯನ್ನು ಹೆಚ್ಚಿಸುವುದರ ಜೊತೆಗೆ ವಿಧಾನ ಸಭಾ ಕ್ಷೇತ್ರವಾರು ಹಂಚಿಕೆ ಮಾಡುವ ಬಗ್ಗೆ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

21. ಶ್ರೀ ವೈ.ಎನ್. ರುದ್ರೇಶ್‌ಗೌಡ ಅವರು ರಾಜ್ಯದಲ್ಲಿ ಸುಮಾರು 50 ವರ್ಷಗಳಿಂದ ಉಳುಮೆ ಮಾಡುತ್ತಿರುವ ಸಣ್ಣ ಹಿಡುವಳಿ ರೈತರ ಭೂಮಿಯನ್ನು ಒತ್ತುವರಿ ಹೆಸರಿನಲ್ಲಿ ಕಂದಾಯ ಇಲಾಖಾಧಿಕಾರಿಗಳು ನೋಟಿಸ್ ನೀಡಿ ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

22. ಶ್ರೀಮತಿ ಶಶಿಕಲಾ ಜೊಲ್ಲೆ ಅವರು ನಿಪ್ಪಾಣಿ ನಗರದಲ್ಲಿ ಏಷ್ಯನ್‌ಡೆವಲಪ್‌ಮೆಂಟ್ ಬೋರ್ಡ್ ವತಿಯಿಂದ ಕೈಗೊಳ್ಳಲಾದ ಕುಡಿಯುವ ನೀರಿನ ಯೋಜನೆ ಕಾಮಗಾರಿಯನ್ನು ಪೂರ್ಣಗೊಳಿಸದಿರುವ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

23. ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು ಲೋಕೋಪಯೋಗಿ ಇಲಾಖೆಯಲ್ಲಿ ತುಂಡು ಗುತ್ತಿಗೆ ನೆಪದಲ್ಲಿ ಅಧಿಕಾರಿಗಳು ಕಾಮಗಾರಿಗಳಲ್ಲಿ ಅವ್ಯವಹಾರ ನಡೆಸುತ್ತಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

24. ಶ್ರೀ ಟಿ. ರಘುಮೂರ್ತಿ ಅವರು ಚಳ್ಳಕೆರೆ ಕ್ಷೇತ್ರಕ್ಕೆ ಸಂಬಂಧಿಸಿದ ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಗ್ರಾಮಕ್ಕೆ 2013-14ನೇ ಸಾಲಿನಲ್ಲಿ ಮಂಜೂರಾಗಿದ್ದ ಜೂನಿಯರ್ ಕಾಲೇಜನ್ನು ಪ್ರಾರಂಭಿಸದಿರುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

25. ಶ್ರೀಮತಿ ವಿನಿಶಾ ನೆರೋ ಅವರು ವಿಕಲಚೇತನರನ್ನು ಸರ್ಕಾರಿ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಸೇರ್ಪಡೆಗೊಳಿಸದಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

26. ಶ್ರೀ ಪ್ರಸಾದ್ ಅಬ್ಬಯ್ಯ ಅವರು ಹುಬ್ಬಳ್ಳಿ-ಧಾರವಾಡ ಪೂರ್ವ ವ್ಯಾಪ್ತಿಯಲ್ಲಿ ಏಷಿಯನ್ ಅಭಿವೃದ್ಧಿ ಬ್ಯಾಂಕ್ ವತಿಯಿಂದ ಉತ್ತರ ಕರ್ನಾಟಕ ನಗರ ವಲಯ ಬಂಡವಾಳ ಹೂಡಿಕೆ ಕಾರ್ಯಕ್ರಮ ಅನ್ವಯ ಒಳಚರಂಡಿ ಮುಖ್ಯ ಮತ್ತು ಉಪಮುಖ್ಯ ಕೊಳವೆ ಅಳವಡಿಸುವ ಕಾಮಗಾರಿಗಳು ಪೂರ್ಣಗೊಳ್ಳದಿರುವ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

27. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ವಿಜಯಪುರ ಮಹಾನಗರ ಪಾಲಿಕೆಯು 2014ರಲ್ಲಿ ತಯಾರಿಸಲಾಗಿರುವ ಮಾಸ್ಟರ್ ಪ್ಲಾನ್ ಅಡಿಯಲ್ಲಿ ಆಸ್ತಿ ಕಳೆದುಕೊಂಡವರಿಗೆ ಪರಿಹಾರ ನೀಡುವಲ್ಲಿ ಆಗಿರುವ ವ್ಯತ್ಯಾಸದ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

28. ಶ್ರೀ ಗಣೇಶ್ ಪ್ರಕಾಶ ಹುಕ್ಕೇರಿ ಅವರು ಚಿಕ್ಕೋಡಿ ಭಾಗದಲ್ಲಿ ಬಿ.ವಿ.ಎಸ್‌ಸಿ, ಕಾಲೇಜನ್ನು ತೆರೆಯುವ ಬಗ್ಗೆ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

29. ಡಾ|| ಕೆ. ಶ್ರೀನಿವಾಸ ಮೂರ್ತಿ ಅವರು ನೆಲಮಂಗಲದ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಡಾನೆಗಳ ಮತ್ತು ಚಿರತೆಗಳ ಹಾವಳಿ ಹೆಚ್ಚಾಗಿದ್ದು ಪ್ರಾಣ ಹಾನಿ ಮತ್ತು ಬೆಳೆ ಹಾನಿಯಾಗಿರುವ ಬಗ್ಗೆ ಅರಣ್ಯ ಸಚಿವರ ಗಮನ ಸೆಳೆಯುವುದು.

30. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಚನ್ನರಾಯಪಟ್ಟಣ ತಾಲ್ಲೂಕಿನ ಹಿರೀಸಾವೆ-ಶ್ರವಣಬೆಳಗೊಳ ಹೋಬಳಿ ಮತ್ತು ಕೆ.ಆರ್.ಪೇಟೆ ತಾಲ್ಲೂಕಿನ ಸಂತೆಬಾಚಹಳ್ಳಿ ಹೋಬಳಿಯ ಕೆರೆಗಳಿಗೆ ಲಿಫ್ಟ್ ಮುಖೇನ ಕುಡಿಯುವ ನೀರಿಗಾಗಿ ಕೆರೆಗಳನ್ನು ತುಂಬಿಸುವ ಯೋಜನೆಯು ಅನುಷ್ಠಾನಗೊಳಸದಿರುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

4. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಹೆಚ್.ಡಿ.ರೇವಣ್ಣ ಅವರು "ನಕಲಿ ದಾಖಲೆಗಳನ್ನು ನೀಡಿರುವ ಗುತ್ತಿಗೆದಾರರ ವಿರುದ್ಧ ಕ್ರಮ" ಬಗ್ಗೆ ದಿನಾಂಕ:09.12.2014ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 01(158)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ಆರ್.ಅಶೋಕ್, ಡಾ|| ಸಿ.ಎನ್. ಅಶ್ವಥ್‌ನಾರಾಯಣ ಅವರು "ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದಾಗಿ ಜನಸಾಮಾನ್ಯರಿಗೆ ತೊಂದರೆಯ" ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N